# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಸ್ಪೋಕನ್ ಇಂಗ್ಲೀಷ್ ಮತ್ತು ವ್ಯಕ್ತಿತ್ವ ವಿಕಸನದ ತರಬೇತಿ ನೀಡಲು ಸ್ಪೂರ್ತಿಯ ನಡೆ ಎಂಬ ಹೊಸ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ.

**ಓದಲಾಗಿದೆ:-** 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-176.

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ 2022-23ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ-176 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು "ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಓದುತ್ತಿರುವ ಮಕ್ಕಳಿಗೆ ಸ್ಪೋಕನ್ ಇಂಗ್ಲೀಷ್ ಹಾಗೂ ವ್ಯಕ್ತಿತ್ವ ವಿಕಸನದ ತರಬೇತಿಗಳನ್ನು 5.00 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು" ಎಂದು ಘೋಷಿಸಿರುತ್ತಾರೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಒಟ್ಟು 1139 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿದ್ದು, ಇದರಲ್ಲಿ 69,867 ಮಂಜೂರಾತಿ ಸಂಖ್ಯಾಬಲದ 630 ಬಾಲಕಿಯರ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹಾಗೂ 58,063 ಮಂಜೂರಾತಿ ಸಂಖ್ಯಾಬಲವಿರುವ 509 ಬಾಲಕರ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಇರುತ್ತವೆ. ಈ ವಿದ್ಯಾರ್ಥಿನಿಲಯಗಳಲ್ಲಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶಗಳಿಂದ ಬಂದಿದ್ದು, ಕನ್ನಡ ಮಾಧ್ಯಮದಲ್ಲಿ ಶಿಕ್ಷಣವನ್ನು ಪಡೆದಿರುತ್ತಾರೆ. ಇಂತಹ ವಿದ್ಯಾರ್ಥಿಗಳನ್ನು ಅವರ ಮುಂದಿನ ಜೀವನದಲ್ಲಿ ಹೆಚ್ಚಿನ ಉದ್ಯೋಗಾವಕಾಶಗಳನ್ನು ಪಡೆಯಲು ಹಾಗೂ ಅವರ ವ್ಯಕ್ತಿತ್ವ ವಿಕಸನಕ್ಕಾಗಿ ಸಮಗ್ರವಾದ ಯೋಜನೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಆಯವ್ಯಯದ ಭಾಷಣದ ಘೋಷಣೆಯಂತೆ "ಸ್ಪೂರ್ತಿಯ ನಡೆಗೆ" ಎಂಬ ಹೊಸ ಯೋಜನೆಯನ್ನು ಜಾರಿಗೊಳಿಸಲು ನಿರ್ಣಯಿಸಲಾಗಿದೆ.

ಈ ಮೆಲಿನ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 227 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:04-05-2022**

ಈ ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-176 ರಲ್ಲಿ ಘೋಷಿಸಿರುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಸ್ಪೋಕನ್ ಇಂಗ್ಲೀಷ್ ಹಾಗೂ ವ್ಯಕ್ತಿತ್ವ ವಿಕಸನದ ತರಬೇತಿಗಳನ್ನು ರಾಜ್ಯವಲಯದ ಅನುದಾನ ಲೆಕ್ಕಶೀರ್ಷಿಕೆ:2225-03-277-2-37(59) ರಡಿಯಲ್ಲಿ ರೂ.5.00 ಕೋಟಿಗಳ ವೆಚ್ಚದಲ್ಲಿ ಸ್ಪೂರ್ತಿಯ ನಡೆ ಎಂಬ ಹೊಸ ಯೋಜನೆಯ ಮೂಲಕ ಪ್ರಾರಂಭಿಸಲು ಈ ಕೆಳಕಂಡ ಮಾರ್ಗಸೂಚಿಗಳಂತೆ ಹಾಗೂ ಷರತ್ತುಗಳಿಗೊಳಪಟ್ಟು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

---2

4/5/22

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಸ್ಪೋಕನ್ ಇಂಗ್ಲೀಷ್ ಮತ್ತು ವ್ಯಕ್ತಿತ್ವ ವಿಕಸನದ ತರಬೇತಿಗಾಗಿ ಸ್ಪೂರ್ತಿಯ ನಡೆ ಎಂಬ ಹೊಸ ಯೋಜನೆಯ ಮಾರ್ಗಸೂಚಿಗಳು.**

1. **ಯೋಜನೆಯ ಉದ್ದೇಶ**:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 1139 ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಿದ್ದು, ಸುಮಾರು 1.27 ಲಕ್ಷ ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯಾಬಲವನ್ನು ಹೊಂದಿದೆ. ಹೆಚ್ಚಿನ ವಿದ್ಯಾರ್ಥಿಗಳು ತಮ್ಮ ಶಾಲಾ ಶಿಕ್ಷಣವನ್ನು ಕನ್ನಡ ಮಾಧ್ಯಮದಲ್ಲಿ ಪಡೆದಿರುತ್ತಾರೆ. ಆದ್ದರಿಂದ ಇಂಗ್ಲಿಷ್‌ನಲ್ಲಿ ಸಂಭಾಷಿಸುವುದು ಸವಾಲಿನ ಸಂಗತಿಯಾಗಿದ್ದು ಅದನ್ನು ನಿವಾರಿಸಲು ಸತತ ಮೂಲಭೂತ ತರಬೇತಿ ಅತ್ಯಗತ್ಯವಾಗಿರುತ್ತದೆ. ಇದರಿಂದ ವಿದ್ಯಾರ್ಥಿಗಳ ಆತ್ಮವಿಶ್ವಾಸವು ಸಹ ಹೆಚ್ಚಾಗುತ್ತದೆ. ಜೊತೆಗೆ ಉದ್ಯೋಗ ಸಿದ್ಧತೆಗಾಗಿ ಸ್ಪೋಕನ್ ಇಂಗ್ಲಿಷ್‌ನ ಭಾಷಾಜ್ಞಾನ ಅವಶ್ಯಕವಿದ್ದು, ಉದ್ಯೋಗ ಅವಕಾಶಗಳನ್ನು ಹೆಚ್ಚಿಸುತ್ತದೆ. ಆದಕಾರಣ ಪ್ರತಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಜೂನ್-2022 ರಿಂದ 10 ತಿಂಗಳ ಕಾಲ ಒಂದು ತಿಂಗಳಲ್ಲಿ 15 ಸ್ಪೋಕನ್ ಇಂಗ್ಲಿಷ್ ತರಬೇತಿ ಅವಧಿಗಳನ್ನು ನಡೆಸಲಾಗುವುದು. ಸದರಿ ತರಬೇತಿ ಅವಧಿಗಳನ್ನು ಆಸಕ್ತಿಯುಳ್ಳ ನುರಿತ ಸರ್ಕಾರಿ ಪದವಿ ಪೂರ್ವ ಇಂಗ್ಲಿಷ್ ಉಪನ್ಯಾಸಕರ ಸೇವೆಗಳ ಮೂಲಕ ನಡೆಸುವುದು. ಮತ್ತು ವ್ಯಕ್ತಿತ್ವ ವಿಕಸನಕ್ಕಾಗಿ ಪ್ರತಿ ತಿಂಗಳು ಎಲ್ಲಾ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಜಿಲ್ಲೆಯಲ್ಲಿ ನುರಿತ ವಿಷಯ ತಜ್ಞರ ಮೂಲಕ ವಿಷಯಾಧಾರಿತ ತರಬೇತಿಯನ್ನು ತಿಂಗಳಲ್ಲಿ ಇಂತಹ ನಾಲ್ಕು ತರಬೇತಿ ಅವಧಿಗಳನ್ನು ಈ ಆದೇಶದಲ್ಲಿ ನಿಗಧಿಪಡಿಸಿರುವ ವಿಷಯದ ಮೇಲೆ ನಡೆಸುವುದು.
2. **ಯೋಜನೆಯ ಗುರಿಗಳು ಮತ್ತು ಕಾಲಾವಧಿ:-**

| ಕ್ರ ಸಂ | ಯೋಜನೆಯ ಗುರಿಗಳು | ಕಾಲಾವಧಿ |
|---|---|---|
| 01 | ಎಲ್ಲಾ 1139 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಧ್ಯಕ್ಷತೆಯಲ್ಲಿನ ಸಮಿತಿಯ ಮೂಲಕ ಸ್ಥಳೀಯವಾಗಿ ಗುರುತಿಸಲ್ಪಟ್ಟ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಇಂಗ್ಲಿಷ್ ಉಪನ್ಯಾಸಕರ ಮೂಲಕ ಪ್ರತಿ ತಿಂಗಳು 15 ಸ್ಪೋಕನ್ ಇಂಗ್ಲಿಷ್ ತರಬೇತಿ ಅವಧಿಗಳ್ಳನ್ನು ಪ್ರಾರಂಭಿಸುವುದು ಮತ್ತು ನಡೆಸುವುದು ಹಾಗೂ ವ್ಯಕ್ತಿತ್ವ ವಿಕಸನದ ವಿಷಯಾಧಾರಿತ ತರಬೇತಿಗೆ ಇದೆ ಸಮಿತಿ ಮೂಲಕ ಸ್ಥಳೀಯವಾಗಿ ಗುರುತಿಸಲ್ಪಟ್ಟ ನುರಿತ ಸಂಪನ್ಮೂಲ ವ್ಯಕ್ತಿಗಳು/ವಿಷಯ ಪರಿಣಿತರ ಮೂಲಕ ಈ ಆದೇಶದಲ್ಲಿ ತಿಂಗಳುವಾರು ನಿಗಧಿ ಪಡಿಸಿರುವ ವಿಷಯದ ಮೇಲೆ 4 ತರಬೇತಿ ಅವಧಿಗಳನ್ನು ಪ್ರಾರಂಭಿಸುವುದು ಮತ್ತು ನಡೆಸುವುದು. | ಜೂನ್ 2022-ಮಾರ್ಚ್ 2023. |

3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರವರು ತಮ್ಮ ಜಿಲ್ಲೆಯಲ್ಲಿ ಇರುವ ಎಲ್ಲಾ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಸ್ಪೂರ್ತಿಯ ನಡೆ ಯೋಜನೆ ಅಡಿಯಲ್ಲಿ ತರಬೇತಿಯ ಅವಕಾಶವನ್ನು ಕಲ್ಪಿಸಲು

---3

4/5/22